ಪಿ.ಡಬ್ಲ್ಯೂ ಃ **1**

ಸಾಕ್ಷಿಗೆ ದಿನಾಂಕಃ **06.08.2026** ರಂದು ಪ್ರಮಾಣ ವಚನ ಬೋಧಿಸಲಾಯಿತು.

**ಪಾಟೀ ಸವಾಲು: 2 ನೇ ಎದುರುದಾರರ ಪರಃ ಶ್ರೀ ವಕೀಲರ ಮೂಲಕ ಃ**

ಬೆಳಿಗ್ಗೆ 5 ಗಂಟೆಯ ಸಮಯದಲ್ಲಿ ಅಪಘಾತದ ಬಗ್ಗೆ ರಂಗಸ್ವಾಮಿ ಎಂಬುವವರು ನಮಗೆ ತಿಳಿಸಿರುತ್ತಾರೆ. ನನಗೆ ಇಬ್ಬರು ಮಕ್ಕಳಿದ್ದು, ಮೃತ ನಾಗೇಶ್ ರವರು ನನ್ನ ಕಿರಿಯ ಮಗ ಆಗಿರುತ್ತಾರೆ. ನನ್ನ ಇನ್ನೊಬ್ಬ ಮಗ ಯೋಗೇಶನ ಜೊತೆ ನಾನು ಮತ್ತು ನನ್ನ ಪತಿ ವಾಸವಿರುತ್ತೇವೆ ಎಂಧರೆ ಆತನು ಪ್ರತ್ಯೇಕವಾಗಿ ವಾಸವಿರುತ್ತಾರೆ. ಬಸ್ ನನ್ನ ಮಗನಿಗೆ ಡಿಕ್ಕಿ ಪಡಿಸಿರುತ್ತದೆ. ರಾತ್ರಿ ಸಮಯದಲ್ಲಿ ಅಪಘಾತವಾಗಿದ್ದು, ಯಾವುದೇ ವಾಹನ ನನ್ನ ಮಗನಿಗೆ ಡಿಕ್ಕಿ ಪಡಿಸಿರುತ್ತದೆ ಎಂದರೆ ಸರಿಯಲ್ಲ. ನಾನು, ರಂಗಸ್ವಾಮಿ ರವರು ಸೇರಿ ಪೊಲೀಸ್ ದಾಖಲೆಗಳನ್ನು ಸೃಷ್ಟಿ ಮಾಡಿರುತ್ತೇವೆ ಎಂದರೆ ಸರಿಯಲ್ಲ. ನನ್ನ ಅರ್ಜಿಯಲ್ಲಿ ಶವ ಸಂಸ್ಕಾರಕ್ಕೆ 1 ಲಕ್ಷ ರೂಪಾಯಿ ಖರ್ಚು ಮಾಡಿರುತ್ತೇವೆ ಎಂದು ಸುಳ್ಳು ಹೇಳುರುತ್ತೇವೆ ಎಂದರೆ ಸರಿಯಲ್ಲ. ನನ್ನ ಮಗನು ಕೆ.ಎಸ್.ಐ.ಸಿ.ಯಲ್ಲಿ ಕೆಲಸ ಮಾಡುತ್ತಿದ್ದರು. ನನ್ನ ಮೃತ ಮಗನು ನನಗೆ ಹಣಕಾಸಿನ ಸಹಾಯ ಮಾಡುತ್ತಿರಲಿಲ್ಲ ಎಂದರೆ ಸರಿಯಲ್ಲ. ಪರಿಹಾರ ಪಡೆಯುವ ಉದ್ದೇಶದಿಂದ ದಾಖಲೆಗಳನ್ನು ಸೃಷ್ಟಿ ಮಾಡಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.

ಸಾಕ್ಷಿಯ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು.

ಓ ಹೇ ಕೇ ಸ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಎಂ.ಎ.ಸಿ.ಟಿ. ಮಳವಳ್ಳಿ.